ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/112/ಬ್ಯಾಕ್‌ಲಾಗ್/ನೇವಿ-2/2011-12(ಭಾಗ-4)

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:20.10.2022.

## ಆದೇಶ

ವಿಷಯ: ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್/13/ಎಸ್‌ಬಿಸಿ/2001, ದಿನಾಂಕ:21.11.2001.
2) ಸರ್ಕಾರದ ಆದೇಶ ಸಂಖ್ಯೆ:ಇಡಿ/357/ಯುಪಿಸಿ/2001, ದಿ:19.12.2002.
3) ಸರ್ಕಾರದ ಪತ್ರ ಸಂಖ್ಯೆ:ಇಡಿ/56/ಯುಪಿಸಿ/2019(ಇ), ದಿನಾಂಕ:18.07.2022.
4) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:17.08.2022.

** ** **

ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ಮೀಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಉಲ್ಲೇಖ (4)ರಲ್ಲಿ ಹೊರಡಿಸಲಾಗಿದ್ದ ಸುತ್ತೋಲೆಯಲ್ಲಿನ ಕಂಡಿಕೆ (2) ನ್ನು ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.

**"ಆಡಳಿತ ಮಂಡಳಿಗಳಿಂದ ಸ್ವೀಕೃತಗೊಂಡ ಪ್ರಸ್ತಾವನೆಯನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಹಂತದಲ್ಲಿ ನಿಯಮಾನುಸಾರ ಕೂಲಂಕಷವಾಗಿ ಪರಿಶೀಲಿಸಿ, ಬೋಧಕರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಮಂಜೂರಾದ ಖಾಲಿ ಹುದ್ದೆ, ಪೂರ್ಣಕಾಲಿಕ ಅನುದಾನಿತ ಕಾರ್ಯಭಾರ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. (ಪ್ರಯೋಗಾಲಯ ತರಗತಿಗಳನ್ನು ಹೊಂದಿರುವ ವಿಷಯಗಳಲ್ಲಿ 20 ಗಂಟೆ ಮತ್ತು ಪ್ರಯೋಗಾಲಯ ತರಗತಿಗಳನ್ನು ಹೊಂದಿಲ್ಲದ ವಿಷಯಗಳಲ್ಲಿ 16 ಗಂಟೆ ಕಾರ್ಯಭಾರ ಕಡ್ಡಾಯವಾಗಿರಬೇಕು. ಕಾರ್ಯಭಾರವನ್ನು ಪರಿಗಣಿಸುವಾಗ ಕಾರ್ಯಭಾರ ಪಟ್ಟಿಯಲ್ಲಿ ಪ್ರತಿ ತರಗತಿವಾರು ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆಯನ್ನು ಗಣನೆಗೆ ತೆಗೆದುಕೊಳ್ಳಬೇಕು. ಒಂದು ವೇಳೆ ವಿದ್ಯಾರ್ಥಿಗಳ ಸಂಖ್ಯೆ ನಿಗದಿತ ಪ್ರಮಾಣಕ್ಕಿಂತ ಕಡಿಮೆಯಿದ್ದಲ್ಲಿ ಆ ತರಗತಿಯ ಕಾರ್ಯಭಾರವನ್ನು ಪರಿಗಣಿಸತಕ್ಕದ್ದಲ್ಲ.) ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಮಂಜೂರಾದ ಖಾಲಿ ಹುದ್ದೆ & ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಸಿಬ್ಬಂದಿ ರೂಪಿಕೆಯನ್ವಯ ಹುದ್ದೆ ಭರ್ತಿ ಮಾಡಬೇಕಾಗಿರುವುದು ಅವಶ್ಯಕತೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ನಂತರ ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಆಡಳಿತ ಮಂಡಳಿಗೆ ಅನುಮತಿ ನೀಡುವ ಬಗ್ಗೆ ತಮ್ಮ ಸ್ಪಷ್ಟ ಅಭಿಪ್ರಾಯ ಮತ್ತು ಸೂಕ್ತ ಶಿಫಾರಸ್ಸಿನೊಂದಿಗೆ ಈ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವುದು."**

ಬ್ಯಾಕ್‌ಲಾಗ್ ಹುದ್ದೆ ಭರ್ತಿಗೆ ಅನುಮತಿ ನೀಡಲು ಈ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವಾಗ ಈ ಕೆಳಕಂಡ ಮಾಹಿತಿ ಹಾಗೂ ದೃಢೀಕೃತ ದಾಖಲೆಗಳನ್ನು ಕಡ್ಡಾಯವಾಗಿ ಪ್ರಸ್ತಾವನೆಯೊಂದಿಗೆ ಸಲ್ಲಿಸತಕ್ಕದ್ದು.

- ಸರ್ಕಾರದ ಆದೇಶ ಸಂಖ್ಯೆ:ಇಡಿ/357/ಯುಪಿಸಿ/2001, ದಿನಾಂಕ:19.12.2002 ರಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳ ಪೈಕಿ ಭರ್ತಿ ಮಾಡಲು ಬಾಕಿಯಿರುವ ಬ್ಯಾಕ್‌ಲಾಗ್ ಹುದ್ದೆಗಳಿಗೆ ಸಂಬಂಧಿಸಿದಂತೆ ಮಂಜೂರಾದ, ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ಹುದ್ದೆಗಳ ಬಗ್ಗೆ ಅಗತ್ಯ ದೃಢೀಕೃತ ದಾಖಲೆಗಳೊಂದಿಗೆ ಖಚಿತ ಮಾಹಿತಿ ಒದಗಿಸುವುದು.

Scanned with CamScanner

- ಬೋಧಕರ ಬ್ಯಾಕ್‌ಲಾಗ್ ಹುದ್ದೆ ಭರ್ತಿಗೆ ಸಂಬಂಧಿಸಿದಂತೆ, ಕಾಲೇಜಿನ ಪ್ರಸಕ್ತ ಶೈಕ್ಷಣಿಕ ಸಾಲಿನ ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆಯನ್ನು ಪರಿಶೀಲಿಸಿ ಅದಕ್ಕನುಗುಣವಾಗಿ ಕಾರ್ಯಭಾರವನ್ನು ಪರಿಗಣಿಸಿ ದೃಢೀಕರಿಸಿ ಸಲ್ಲಿಸುವುದು. (ಡಬ್ಲ್ಯೂ.ಎಸ್. ನಮೂನೆಯಲ್ಲಿ ಸಲ್ಲಿಸುವುದು).
- ಬೋಧಕೇತರ ಬ್ಯಾಕ್‌ಲಾಗ್ ಹುದ್ದೆ ಭರ್ತಿಗೆ ಸಂಬಂಧಿಸಿದಂತೆ, ಕಾಲೇಜಿನ ಪ್ರಸಕ್ತ ಶೈಕ್ಷಣಿಕ ಸಾಲಿನ ಅನುದಾನಿತ ವಿದ್ಯಾರ್ಥಿಗಳ ಸಂಖ್ಯೆಯನ್ನು ಪರಿಶೀಲಿಸಿ ಹಾಗೂ ಸಿಬ್ಬಂದಿ ರೂಪಿಕೆಯನ್ವಯ ಹುದ್ದೆ ಭರ್ತಿ ಅವಶ್ಯಕತೆ ಇರುವ ಬಗ್ಗೆ ಪರಿಗಣಿಸಿ ಖಚಿತ ಮಾಹಿತಿಯೊಂದಿಗೆ ಪ್ರಸ್ತಾವನೆ ಸಲ್ಲಿಸುವುದು.

ಮೇಲೆ ತಿಳಿಸಿರುವಂತೆ ಉಲ್ಲೇಖ (4)ರ ಈ ಕಛೇರಿಯ ಸುತ್ತೋಲೆಯ ಕಂಡಿಕೆ (2) ನ್ನು ತಿದ್ದುಪಡಿಗೊಳಿಸಿರುವುದರಿಂದ ಇನ್ನು ಮುಂದೆ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಹಂತದಲ್ಲಿ ಯಾವುದೇ ಆಡಳಿತ ಮಂಡಳಿ/ಕಾಲೇಜಿಗೆ ಅನುಮತಿ ನೀಡುವಂತಿಲ್ಲ.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಅನುಮತಿ ಕೋರಿ ಆಡಳಿತ ಮಂಡಳಿಗಳು ಸಲ್ಲಿಸುವ ಪ್ರಸ್ತಾವನೆಗಳನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ ಹಂತದಲ್ಲಿ ನಿಯಮಗಳನ್ವಯ ಪರಿಶೀಲಿಸಿ ಅಗತ್ಯವಿರುವ ಎಲ್ಲಾ ಮಾಹಿತಿ ಮತ್ತು ದೃಢೀಕೃತ ದಾಖಲೆಗಳೊಂದಿಗೆ ಮತ್ತು ಪ್ರಾದೇಶಿಕ ಜಂಟಿ ನಿರ್ದೇಶಕರ ಸ್ಪಷ್ಟ ಅಭಿಪ್ರಾಯದೊಂದಿಗೆ ಈ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವುದು. ಈ ಕಛೇರಿಯಲ್ಲಿ ಪ್ರಸ್ತಾವನೆ ಸ್ವೀಕೃತಗೊಂಡ ನಂತರ ಪರಿಶೀಲಿಸಿ ನಿಯಮಾನುಸಾರ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಈ ಕಛೇರಿ ಹಂತದಲ್ಲಿ ಅನುಮತಿ ನೀಡಲಾಗುವುದು.

ಈ ಕಛೇರಿಯಿಂದ ಅನುಮತಿ ದೊರೆತ ನಂತರ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗಾಗಿ ನಿಯಮಾನುಸಾರ ಅಂದರೆ ದಿನಾಂಕ:17.08.2022 ರ ಸುತ್ತೋಲೆಯಲ್ಲಿ ತಿಳಿಸಿರುವ ಎಲ್ಲಾ ಮಾರ್ಗಸೂಚಿಗಳನ್ನು ಅನುಸರಿಸಿ (ಹಾಗೂ ಸದರಿ ಸುತ್ತೋಲೆಯ ಕಂಡಿಕೆ (2)ರ ತಿದ್ದುಪಡಿಯನ್ವಯ) ಮುಂದಿನ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

**"ಮಾನ್ಯ ಆಯುಕ್ತರ ಆದೇಶದ ಮೇರೆಗೆ"**

20.10.2022

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ,**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ & ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
5. ಹೆಚ್ಚುವರಿ ಪ್ರತಿ.
6. ಕಛೇರಿ ಪ್ರತಿ.

Scanned with CamScanner